# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **853**

**ಮಾನ್ಯ ಸದಸ್ಯರ ಹೆಸರು** : **ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)**

**ಉತ್ತರಿಸಬೇಕಾದ ದಿನಾಂಕ** : **11.03.2026**

**ಉತ್ತರಿಸಬೇಕಾದ ಸಚಿವರು** : **ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ: | ಬಂದಿರುವುದಿಲ್ಲ. |
| ಆ) | ಪಶುಸಂಗೋಪನೆ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ: | ಪಶುಸಂಗೋಪನೆ ಇಲಾಖೆಗೆ ಔಷಧಿ ಖರೀದಿ ಮಾಡಲು 2025-26ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ರಾಜ್ಯವಲಯದ ಅನುದಾನಕ್ಕೆ ಸರ್ಕಾರದಿಂದ ಹಾಗೂ ಜಿಲ್ಲಾ ಪಂಚಾಯತ್ ಅನುದಾನಕ್ಕೆ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳಿಂದ ಅನುಮತಿ ನೀಡಲಾಗಿರುತ್ತದೆ. |
| ಇ) | ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು; ಪಶು ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆಯಾಗದಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ರಾಜ್ಯದಲ್ಲಿರುವ ಪಶುವೈದ್ಯ ಸಂಸ್ಥೆಗಳಿಂದ ಅಗತ್ಯವಿರುವ ಔಷಧಿಗಳ ಬೇಡಿಕೆಯನ್ನು ಪಡೆದು, ಸರ್ಕಾರವು ನಿಗದಿಪಡಿಸುವ ಅನುದಾನದಲ್ಲಿ ಕೇಂದ್ರ ಕಛೇರಿಯಲ್ಲಿ ಔಷಧಿಗಳ ಖರೀದಿಗಾಗಿ ಕೆ.ಟಿ.ಪಿ.ಪಿ ಕಾಯ್ದೆಯನ್ವಯ ಟೆಂಡರ್ ಕರೆದು, ನಿಯಮಾನುಸಾರ ದರನಿಗದಿಗೊಳಿಸಿ, ರಾಜ್ಯಾದ್ಯಂತ ಔಷಧಿಗಳನ್ನು ಏಕ ರೂಪ ದರದಲ್ಲಿ ರಾಜ್ಯ ವಲಯದ ಅನುದಾನ ಹಾಗೂ ಎಲ್ಲಾ ಜಿಲ್ಲೆಗಳಲ್ಲಿಯೂ ಸಹ ಜಿಲ್ಲಾ ಪಂಚಾಯತ್ ಅನುದಾನದಲ್ಲಿ ಖರೀದಿಸುವ ಮುಖಾಂತರ ಇಡೀ ರಾಜ್ಯದಲ್ಲಿ ಏಕರೂಪ ಬೆಲೆ ನಿಗದಿ ಪಡಿಸಲು ಕ್ರಮಕೈಗೊಳ್ಳಲಾಗಿದೆ. |

| | | |
|---|---|---|
| | | ಪಶು ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆಯಾಗದಂತೆ 2025-26ನೇ ಸಾಲಿನ ಆರ್ಥಿಕ ವರ್ಷದಲ್ಲಿ ಹೆಚ್ಚುವರಿಯಾಗಿ ರೂ.2382.01 ಲಕ್ಷಗಳ ಅನುದಾನವನ್ನು ಔಷಧಿ ಮತ್ತು ರಾಸಾಯನಿಕಗಳ ಸರಬರಾಜು ಕುರಿತು ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ. |

**ಸಂಖ್ಯೆ:ಪಸಂಮೀ 41 ಸಲೆವಿ 2026**

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು